## ಒಂದನೇ ಅಪರ  ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ ರವರ ನ್ಯಾಯಾಲಯ, ಕೊಳ್ಳೇಗಾಲ

## ಸಿ ಸಿ ಸಂಖ್ಯೆ 513/2023

ಚಾಸಾ 6  ಫ್ರಾಸಾ 5

| | | |
|---|---|---|
| ಸಾಕ್ಷಿಯ ಹೆಸರು | : | ಶ್ರೀ ಶ್ರೀನಿವಾಸ್ |
| ತಂದೆಯ ಹೆಸರು | : | ದಾಸಶೆಟ್ಟಿ |
| ವಯಸ್ಸು | : | 55 ವರ್ಷ |
| ಉದ್ಯೋಗ | : | ಚಾಲಕ ಮ.ಮ. ಬೆಟ್ಟ |
| ವಾಸ ಸ್ಥಳ | : | ಮಧುವನ ಹಳ್ಳಿ ಗ್ರಾಮ |

ದಿನಾಂಕ 07.07.2026 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ – ಮಾನ್ಯ ಸಸಅ ರವರಿಂದ

ನನಗೆ ಚಾಸಾ–1 ಮತ್ತು ಚಾಸಾ –5 ರವರ ಪರಿಚಯ ಇರುತ್ತದೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದು ಅಮಾನತ್ತು ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ–3 ಎಂದು ಗುರುತಿಸಿದ್ದು, ನಿಪಿ–3 ರಲ್ಲಿ ಸಾಕ್ಷಿಯು ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ–3(ಸಿ) ಎಂದು ಗುರುತಿಸಲಾಯಿತು. ನಿಪಿ–3ಕ್ಕೆ ನಾನು ದಿಃ20.10.2022ರಂದು ಮ.ಮ.ಬೆಟ್ಟ ಪಾಧಿಕಾರದ ಕಛೇರಿಯಲ್ಲಿ ಸಹಿ ಮಾಡಿರುತ್ತೇನೆ. ನಿಪಿ–3 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಈ ಪ್ರಕರಣದ ವಿದ್ಯಾಮಾನ ನನಗೆ ಗೊತ್ತಿರುವುದಿಲ್ಲ.

ಸಾಕ್ಷಿಗೆ ಒಂದು ಭಾವಚಿತ್ರ ತೋರಿಸಲಾಗಿ, ಅದನ್ನು ಈಗಾಗಲೇ ನಿಪಿ–4 ಎಂದು ಗುರುತಿಸಲಾಗಿದ್ದು, ನಿಪಿ–4 ರಲ್ಲಿ ಸಾಕ್ಷಿಯು ತಮ್ಮನ್ನು ನೋಡಿ ಗುರುತಿಸಿರುತ್ತಾರೆ. ನಿಪಿ–4ನ್ನು ಹುಂಡಿ ಕಳ್ಳತನವಾದ ವಿಚಾರವಾಗಿ ತೆಗೆದಿರುತ್ತಾರೆ ಅದನ್ನು ಹೊರತುಪಡಿಸಿ ಬೇರೆ ಏನು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಈ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾದ ಕಾರಣ ಸಹಾಯಕ ಸರ್ಕಾರಿ ಅಭಿಯೋಜಕರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು ಕಾಲಾವಕಾಶ ನೀಡಲಾಗಿದೆ)**

**ಪಾಟೀ ಸವಾಲು : ಮಾನ್ಯ ಸ.ಸ.ಅ ರವರಿಂದ**

ದಿಃ20.10.2022ರಂದು ಪೊಲೀಸರು ನನ್ನನ್ನು ಮತ್ತು ಚಾಸಾ–5 ರವರನ್ನು ಬರಮಾಡಿಕೊಂಡು ಕೇಸಿನ ವಿದ್ಯಾಮಾನ ತಿಳಿಸಿ ಪಂಚರಾಗಲು ಕೋರಿಕೊಂಡರು ಎಂದರೆ ಸರಿ. ಆಗ ಚಾಸಾ–1 ರವರು ಆರೋಪಿ ಕಳ್ಳತನ ಮಾಡಿ ಶೌಚಾಲಯದಲ್ಲಿ ಬಚ್ಚಿಟ್ಟಿದ್ದ ಹುಂಡಿ ಎಣಿಕೆ ಹಣದ ಚಿತ್ರೀಕರಣದ ನಿಪಿ–7ರ ಸಿ.ಡಿ.ಯನ್ನು ಹಾಜರುಪಡಿಸಿದ ಮೇರೆಗೆ ಪೊಲೀಸರು ನನ್ನ ಮತ್ತು ಚಾಸಾ–5 ರವರ ಸಮಕ್ಷಮ ಮಧ್ಯಾಹ್ನ 2–30 ರಿಂದ 3–30 ರವರಗೆ ಮಹಜರ್ ಕ್ರಮ ಜರುಗಿಸಿ ಅಮಾನತ್ತು ಪಡಿಸಿಕೊಂಡರು ಎಂದರೆ ಸರಿ . ಸ್ಥಳದಲ್ಲಿ ನನ್ನ ಮತ್ತು ಚಾಸಾ–5 ರವರ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿ . ನಿಪಿ–3 ರ ಕಾಲದಲ್ಲಿ ನಿಪಿ–4 ರ ಫೋಟೋವನ್ನು ತೆಗೆದಿರುತ್ತಾರೆ ಎಂದರೆ ಸರಿ .

**ಪಾಟೀ ಸವಾಲುಃ ಶ್ರೀ ಎಂ.ಎಸ್.ಆರ್. ಆರೋಪಿ ಪರ ವಕೀಲರು**

ದಿಃ20.10.2022ರಂದು ಬೆಳಿಗ್ಗೆ ಯಿಂದ ಸಂಜೆಯವರೆಗೂ ಮ.ಮ.ಬೆಟ್ಟದಲ್ಲಿ ನನ್ನ ವಾಹನದಲ್ಲಿ ಇದ್ದೆನು. ನಂತರ ಪೊಲೀಸ್ ಠಾಣೆಗೆ ಹೋಗಿ ಸಹಿ ಮಾಡಿರುತ್ತೇನೆ ಎಂದರೆ ಸರಿ . ಅದನ್ನು ಹೊರತುಪಡಿಸಿ ಬೇರೆ ನನಗೆ ಏನು ಗೊತ್ತಿಲ್ಲ ಎಂದರೆ ಸರಿ . ಅಂದು ನಾನು ವಾಹನದಲ್ಲಿ ಇದ್ದುದರಿಂದ ಪೊಲೀಸರು ಚಾಸಾ-1 ರವರಿಂದ ಯಾವ ವಸ್ತುವನ್ನು ಪಡೆದುಕೊಂಡರು ಏನೆಲ್ಲಾ ಬರವಣಿಗೆ ಮಾಡಿದರು ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ . ನಿಪಿ-4ನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ . ನಿಪಿ-3ಕ್ಕೆ ನಾನು ಒಬ್ಬನೇ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ-1 ರವರು ಸಾಕ್ಷಿ ನುಡಿಯಲು ಹೇಳಿರುವುದರಿಂದ ನಾನು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿ.

**ಮರುವಿಚಾರಣೆಃಇಲ್ಲ**.

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ ಹೇ ಕೇ ಸ ಇದೆ,

(ಎಂ. ರಂಜಿತ್ ಕುಮಾರ್)
ಒಂದನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಕೊಳ್ಳೇಗಾಲ.